ಪ್ರಬಂಧ

# ಕಥೆಯಾಯಿತು ಮರ



ಯೋಗೀಂದ್ರ ಮರವಂತೆ

ಈ ವರ್ಷದ ಜುಲೈ ತಿಂಗಳ ಹದಿನೈದನೇ ತಾರೀಕಿನಂದು ಜಗತ್ತಿನ ಯಾವ ಯಾವ ನ್ಯಾಯಾಲಯದಲ್ಲಿ ಎಷ್ಟೆಷ್ಟು ವಾದ- ಪ್ರತಿವಾದ ನಡೆಯಿತೋ ಗೊತ್ತಿಲ್ಲ. ಯಾರು ಕೊಲೆಗಾರ, ಅಲ್ಲದಿದ್ದರೆ ವಂಚಕ ಎಂದು ಸಾಬೀತಾಯಿತೋ ತಿಳಿದಿಲ್ಲ. ಎಷ್ಟು ಆಪಾದಿತರಿಗೆ ಶಿಕ್ಷೆಯ ಘೋಷಣೆ, ಇನ್ನೆಷ್ಟು ನಿರಪರಾಧಿಗಳ ಖುಲಾಸೆ ಎಂದು ಹೇಳುವುದು ಅಸಾಧ್ಯ. ಆದರೆ ಇಂಗ್ಲೆಂಡ್‌ನ ಉತ್ತರ ಗಡಿಯ ನ್ಯೂ ಕಾಸಲ್ ಕ್ರೌನ್ ಕೋರ್ಟಿನ ನ್ಯಾಯಾಧೀಶರು ಆ ದಿನ ಅತ್ಯಂತ ವಿಶಿಷ್ಟ ತೀರ್ಪೊಂದನ್ನು ನೀಡಿದ್ದರು. ಆ ತೀರ್ಪು, ಆ ದಿನದ ಮಾತ್ರವಲ್ಲ, ಇಡೀ ವರ್ಷದ, ದಶಕದ, ಶತಮಾನದ, ಅಲ್ಲದಿದ್ದರೆ ಯಾವ ನ್ಯಾಯ ವ್ಯವಸ್ಥೆಯೂ ಎಂದೂ ಉಚ್ಚರಿಸಿರಲಾರದ ಅಪೂರ್ವ ತೀರ್ಪೂ ಆಗಿದ್ದಿರಬೇಕು. ಅಂದು ಕಟಕಟೆಯಲ್ಲಿ ನಿಂತಿದ್ದ ಇಂಗ್ಲೆಂಡ್‌ನ ಉತ್ತರ-ಪಶ್ಚಿಮ (ವಾಯುವ್ಯ) ಪ್ರಾಂತ್ಯದ ಇಬ್ಬರು ಸಾಮಾನ್ಯ ವ್ಯಕ್ತಿಗಳ ಕಿಡಿಗೇಡಿತನ ಸಾಬೀತಾಗಿತ್ತು. ಅವರೇ ಅಪರಾಧಿಗಳು ಎಂದು ತೀರ್ಪು ಹೊರಬಿದ್ದಿತ್ತು, ಅವರ ಅಪರಾಧಕ್ಕೆ ಐವತ್ತೊಂದು ತಿಂಗಳ ಜೈಲು ಶಿಕ್ಷೆ ಘೋಷಣೆ ಆಗಿತ್ತು.

ಆರೋಪಿಗಳಿಗೆ ಶಿಕ್ಷೆ ಆಗುವುದೇನೂ ಹೊಸತಲ್ಲ ಬಿಡಿ. ಅಂದು, ಆರೋಪಿಯಿಂದ ಅಪರಾಧಿಗಳಾಗಿ ಬದಲಾದವರು ವಾಯವ್ಯ ಇಂಗ್ಲೆಂಡ್‌ನ ಕಂಬ್ರಿಯ ಅಥವಾ ಅದೇ ಪ್ರಾಂತ್ಯದ ವಿಶ್ವವಿಖ್ಯಾತ ಹೆಸರಾದ ಲೇಕ್ ಡಿಸ್ಟ್ರಿಕ್ಟ್ ಪ್ರದೇಶದ ನಿವಾಸಿಗಳು. ಅವರೊಂದು ಕುಚೋದ್ಯವನ್ನು ಮಾಡಿದ್ದರು. ಸುಮಾರು ಎರಡು ವರ್ಷಗಳ ಹಿಂದಿನ ನಡುರಾತ್ರಿಯಲ್ಲಿ, ತುಸು ದೂರ ಕಾರು ಓಡಿಸಿಕೊಂಡು ಹೋಗಿ, ಆಮೇಲೆ ಇಪ್ಪತ್ತು ನಿಮಿಷ ನಡೆದು, ಗರಗಸ ಹಿಡಿದು ನಾರ್ದಮ್ಬರಲ್ಯಾಂಡ್ ಎನ್ನುವ ಪ್ರದೇಶಕ್ಕೆ ಬಂದಿದ್ದರು. ಜೋರು ಗಾಳಿ ಬೀಸುವ ತಣ್ಣಗಿನ ಹವೆಯ ಆ ರಾತ್ರಿ ಅಲ್ಲಿದ್ದ ಒಂದು ಪುರಾತನ ವೃಕ್ಷವನ್ನು ವಿನಾಕಾರಣ ಕಡಿದಿದ್ದರು. ಸಕಾರಣವಾಗಿಯಾದರೂ ಒಂದು ಮರವನ್ನು ಕಡಿಯಬಹುದೇ? ಅದೊಂದು ದೊಡ್ಡ ಜಿಜ್ಞಾಸೆ. ಮರಗಳಿಗೆ ವಿವೇಚನೆ ಇದ್ದರೆ, ಅದಕ್ಕೆ ತಕ್ಕುದಾಗಿ ಮಾತೂ ಬರುವಂತಿದ್ದಿದ್ದರೆ ಅವುಗಳ ಅಭಿಪ್ರಾಯ ಏನಿರುತ್ತಿತ್ತೋ? ಒಬ್ಬ ವ್ಯಕ್ತಿಯನ್ನು ಕೊಲ್ಲಬಹುದೇ ಎನ್ನುವ ಪ್ರಶ್ನೆಗೆ ಮನುಷ್ಯರು ನೀಡಬಹುದಾದ ಉತ್ತರಕ್ಕಿಂತ ಮರಗಳು ನೀಡುವ ಉತ್ತರ ಬಹಳ ಭಿನ್ನ ಇರಲಿಕ್ಕಿಲ್ಲ. ಹಾಗಂತ ಭೂಮಿ ಆಕಾಶಗಳ ಪ್ರತಿ ಅಂಗುಲಕ್ಕೂ ಅನಭಿಷಕ್ತ ದೊರೆಯಂತೆ ವರ್ತಿಸುವ ಮನುಷ್ಯರಿಗೆ ಮರಗಳನ್ನು ಕಡಿಯಬಹುದೇ ಎನ್ನುವ ಪ್ರಶ್ನೆಯೇ ಅಪ್ರಸ್ತುತ ವಿಲಕ್ಷಣ ವಿನೋದವಾಗಿ ಕಂಡೀತು.

ಇರಲಿ, ಅಂತೂ ಆ ಇಬ್ಬರು ಜೊತೆಯಾಗಿ ಎಲ್ಲ ಅರ್ಥ ಜಿಜ್ಞಾಸೆಗಳನ್ನು ಮೀರಿ ಮರವೊಂದನ್ನು ಕಡಿದಿದ್ದರು. ಹಾಗೆ ತಾವು ಕಡಿದು ಒರಗಿಸಿದ ಮರದ ದಿಮ್ಮಿ, ತೊಗಟೆ, ಎಲೆ, ಟೊಂಗೆ, ಟಿಸಿಲು, ಬೇರು, ನಾರು, ಯಾವುದೂ ಆ ಮರಕಟುಕರಿಗೆ